(25)

# ಕರ್ನಾಟಕ ಸರ್ಕಾರ

ಸಂಖ್ಯೆ: MWD 216 WES 2009

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 29-05-2010.

## ಸುತ್ತೋಲೆ

ರಾಜ್ಯದಲ್ಲಿನ ವಕ್ಫ್ ಆಸ್ತಿಗಳನ್ನು ಸರ್ಕಾರದ ಇಲಾಖೆಗಳು ನಿಗಮ, ಮಂಡಳಿ ಮತ್ತು ಸ್ಥಳೀಯರು ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ವಕ್ಫ್ ಆಸ್ತಿಗೆ ಅಪಾರ ನಷ್ಟ ಉಂಟಾಗಿರುವುದು ಕಂಡು ಬಂದಿರುತ್ತದೆ.

ಈ ಸಂಬಂಧ ಅಂತಹ ಒತ್ತುವರಿ ವಕ್ಫ್ ಆಸ್ತಿ ಅತಿಕ್ರಮಣ ಪ್ರಕರಣಗಳನ್ನು ಗುರುತಿಸಿ ರಾಜ್ಯಾದಾದ್ಯಂತ ವಿಭಾಗ 55ರ ವಕ್ಫ್ ಕಾಯ್ದೆ 1995ರಡಿ ವಕ್ಫ್ ನೋಟೀಸ್‌ಗಳನ್ನು ಜಾರಿ ಮಾಡಿ ವಕ್ಫ್ ಆಸ್ತಿ ತೆರವುಗೊಳಿಸಿ ಅಂತಹ ಆಸ್ತಿಗಳನ್ನು ವಕ್ಫ್ ಸಂಸ್ಥೆಗಳಿಗೆ ಹಸ್ತಾಂತರಿಸಲು ಸಂಬಂಧಪಟ್ಟ ಉಪವಿಭಾಗೀಯ ದಂಡಾಧಿಕಾರಿಗಳಿಗೆ ನಿರ್ದೇಶಿಸಲಾಗಿರುತ್ತದೆ. ಹಲವು ಜಿಲ್ಲೆಗಳಲ್ಲಿ ವಕ್ಫ್ ಆಸ್ತಿಗಳ ಸಂರಕ್ಷಣೆಗಾಗಿ, ಜಿಲ್ಲಾ ವಕ್ಫ್ ಸಲಹಾ ಸಮಿತಿ, ಜಿಲ್ಲಾಧಿಕಾರಿ ಮತ್ತು ಪೋಲೀಸ್ ವರಿಷ್ಠಾಧಿಕಾರಿಗಳ ಸಹಾಯವನ್ನು ಕೋರಿದ್ದರೂ, ಜಿಲ್ಲಾ ಮತ್ತು ಸ್ಥಳೀಯ ಅಧಿಕಾರಿಗಳಿಂದ ಅಗತ್ಯ ರಕ್ಷಣೆ ಸಿಗುತ್ತಿರುವುದಿಲ್ಲ ಎಂಬುದು ತಿಳಿದುಬಂದಿರುತ್ತದೆ. ಇನ್ನಿತರೆ ಜಿಲ್ಲೆಗಳಲ್ಲಿ ಸಂಬಂಧಿತ ನ್ಯಾಯಾಲಯಗಳಿಂದ ವಕ್ಫ್ ಆಸ್ತಿ ಎಂದು ಆದೇಶಗಳು ಆಗಿದ್ದರೂ, ಆ ಆಸ್ತಿಗಳ ಖಾತೆ ಬದಲಾವಣೆಯ ಪ್ರಕರಣಗಳು ಇತ್ಯರ್ಥವಾಗದೆ ಬಾಕಿ ಉಳಿದಿರುವುದಾಗಿ ತಿಳಿದು ಬಂದಿರುತ್ತದೆ.

ಆದುದರಿಂದ, ಮೇಲೆ ತಿಳಿಸಿದಂತೆ ರಾಜ್ಯಾದಾದ್ಯಂತ ಒತ್ತುವರಿಯಾಗಿರುವ ವಕ್ಫ್ ಆಸ್ತಿಗಳನ್ನು ತೆರವುಗೊಳಿಸುವ ಬಗ್ಗೆ, ಸಂರಕ್ಷಿಸುವ ಬಗ್ಗೆ ಹಾಗೂ ವಕ್ಫ್ ಆಸ್ತಿಗಳ ಖಾತೆ ಬದಲಾವಣೆಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಪೋಲೀಸ್ ವರಿಷ್ಠಾಧಿಕಾರಿಗಳು ಹಾಗೂ ಉಪವಿಭಾಗಾಧಿಕಾರಿಗಳಿಗೆ ಈ ಮೂಲಕ ಸೂಚನೆ ನೀಡಲಾಗಿದೆ.

Ranganath S V

(ಎಸ್.ವಿ.ರಂಗನಾಥ್)
ಮುಖ್ಯಕಾರ್ಯದರ್ಶಿ

ಗೆ:

ಎಲ್ಲಾ ಜಿಲ್ಲಾಧಿಕಾರಿಗಳು/ಪೋಲೀಸ್ ವರಿಷ್ಠಾಧಿಕಾರಿಗಳು/ಉಪವಿಭಾಗಾಧಿಕಾರಿಗಳು

ಪ್ರತಿ:

1) ಮುಖ್ಯಮಂತ್ರಿಗಳ ಉಪಕಾರ್ಯದರ್ಶಿಯವರ ಮಾಹಿತಿಗಾಗಿ
2) ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ
4) ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು
5) ಎಲ್ಲಾ ಜಿಲ್ಲಾ ವಕ್ಫ್ ಸಲಹಾ ಸಮಿತಿಗಳು